**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು ಇವರ ನ್ಯಾಯಾಲಯ, ಮೂಡಿಗೆರೆ.**

**ಸಿ.ಸಿ. ಸಂಖ್ಯೆ.287/2022**

ಸಾಕ್ಷಿದಾರರ ಹೆಸರು : ರಮೇಶ್ ಸಿ.ಡಬ್ಲ್ಯೂ: 4 ಪಿ.ಡಬ್ಲ್ಯೂ: 4

ತಂದೆಯ ಹೆಸರು : ಈರಯ್ಯ

ವಯಸ್ಸು : 36 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸ ಸ್ಥಳ : ಕಿರಗುಂದೂರು

ದಿನಾಂಕ: 15.11.2023 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.

**ಮುಖ್ಯ ವಿಚಾರಣೆ ಸ.ಸ.ಅ.ರವರಿಂದ:**

1. ಈಗ ನನಗೆ ತೋರಿಸಿದ ಮಹಜರ್ ನಲ್ಲಿ ಇರುವ ಸಹಿ ನನ್ನದೇ ಇರುತ್ತದೆ. ಮಹಜರ್ ನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ಮಹಜರ್ ನ್ನು ನಿ.ಪಿ.8 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿ.ಪಿ.8(ಎ) ಎಂದು ಗುರುತಿಸಲಾಯಿತು. ನನ್ನ ಸಮಕ್ಷಮ ಪೊಲೀಸರು ಯಾವುದೇ ಸ್ವತ್ತುಗಳನ್ನು ಅಮಾನತ್ತು ಪಡಿಸಿಕೊಂಡಿರುವುದಿಲ್ಲ. ನನ್ನ ಸಮಕ್ಷಮ ಚಾಸಾ.5 ರವರು ನಿ.ಪಿ.8 ದಾಖಲೆಗೆ ಸಹಿ ಮಾಡಿರುತ್ತಾರೆ. ನಿ.ಪಿ.8 ರಲ್ಲಿ ಏನು ಬರೆದಿದೆ ಎಂದು ನನಗೆ ಗೊತ್ತಿಲ್ಲ. ನಿ.ಪಿ.8 ದಾಖಲೆಯನ್ನು ನಾನು ಓದಿ ನೋಡಿರುವುದಿಲ್ಲ. ನಿ.ಪಿ.8 ದಾಖಲೆಯನ್ನು ನನಗೆ ಪೊಲೀಸರು ಓದಿ ಹೇಳಿರುವುದಿಲ್ಲ. ಯಾವ ಕಾರಣಕ್ಕಾಗಿ ನಿ.ಪಿ.8 ದಾಖಲೆಗೆ ಸಹಿ ಮಾಡಿರುತ್ತೇನೆ ಎಂದು ನನಗೆ ಗೊತ್ತಿಲ್ಲ. ಪೊಲೀಸರ ಕೋರಿಕೆಯ ಮೇರೆಗೆ ಸದರಿ ಸಹಿಯನ್ನು ಹಾಕಿರುತ್ತೇನೆ. ಛಾಯಚಿತ್ರವನ್ನು ಸಾಕ್ಷಿಯು ನೋಡಿ ಗುರುತಿಸಿದ್ದು ನಿ.ಪಿ.9 ಎಂದು ಗುರುತಿಸಲಾಯಿತು. ಈಗ ನನಗೆ ತೋರಿಸಿದ ನೋಟೀಸಿನಲ್ಲಿ ಇರುವ ಸಹಿ ನನ್ನದೇ ಇರುತ್ತದೆ. ನೋಟೀಸನ್ನು ನಿ.ಪಿ.10 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿ.ಪಿ.10(ಎ) ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಮಾನ್ಯ ಸ.ಸ.ಅ. ರವರು ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು ಅನುಮತಿ ನೀಡಿದೆ)

**<u>ಪಾಟೀ ಸವಾಲು ಸ.ಸ.ಅ. ರವರಿಂದ</u>**

2. ದಿಃ 17.01.2022 ರಂದು ಈ ಪ್ರಕರಣದ ಎಲ್ಲಾ ವಿಚಾರಗಳನ್ನು ಪೊಲೀಸರು ನನಗೆ ಮತ್ತು ಚಾಸಾ.5 ರವರಿಗೆ ತಿಳಿಸಿ ಪಂಚರಾಗಿ ಸಹಕರಿಸುವಂತೆ ನೋಟೀಸು ನೀಡಿರುತ್ತಾರೆ ಎಂದರೆ ಸರಿಯಲ್ಲ. ಆ ಮೇರೆಗೆ ನಾನು ಮತ್ತು ಚಾಸಾ.5 ರವರು ಮಹಜರ್ ಕಾಲದಲ್ಲಿ ಹಾಜರಿದ್ದು ಮಹಜರ್ ಗೆ ಸಹಿ ಮಾಡಿರುತ್ತೇವೆ ಎಂದರೆ ಸರಿಯಲ್ಲ. ನನ್ನ ಮತ್ತು ಚಾಸಾ.5 ರವರ ಸಮಕ್ಷಮ ಪೊಲೀಸರು 100 ಕೆ.ಜಿ ಹಸಿ ಅಡಿಕೆಯನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಿ.ಪಿ.8 ಮಹಜರ್ ನ್ನು ದಿಃ 17.01.2022 ರಂದು ಮಧ್ಯಾಹ್ನ 12 ರಿಂದ 1 ಗಂಟೆ ಸಮಯದಲ್ಲಿ ನನ್ನ ಹಾಗೂ ಚಾಸಾ.5 ರವರ ಸಮಕ್ಷಮ ಪೊಲೀಸರು ತಕ್ಷೀರು ಸ್ಥಳದಲ್ಲಿ ಬರೆದಿರುತ್ತಾರೆ ಎಂದರೆ ಸರಿಯಲ್ಲ. ಅಮಾನತ್ತು ಸಮಯಲ್ಲಿ ನಿ.ಪಿ.9 ರಂತೆ ಪೊಲೀಸರು ಛಾಯಚಿತ್ರವನ್ನು ತೆಗೆದಿರುತ್ತಾರೆ ಎಂದರೆ ಸರಿಯಲ್ಲ. ಈ ಪ್ರಕರಣದ ಎಲ್ಲಾ ವಿಚಾರಗಳು ಗೊತ್ತಿದ್ದರು ಆರೋಪಿಗಳಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲು ಶ್ರೀ ಕೆ.ಸಿ.ಸಿ ವಕೀಲರಿಂದ – 6 ಮತ್ತು 7 ನೇ ಆರೋಪಿತರ ಪರವಾಗಿ</u>**

3. ಪಾಟೀ ಸವಾಲು ಇರುವುದಿಲ್ಲ.

**<u>ಪಾಟೀ ಸವಾಲು ಶ್ರೀ ಎಸ್.ಡಿ. ವಕೀಲರಿಂದ – 1 ರಿಂದ 4 ನೇ ಆರೋಪಿತನ ಪರವಾಗಿ</u>**

4. ಪಾಟೀ ಸವಾಲು ಇರುವುದಿಲ್ಲ.

**<u>ಪಾಟೀ ಸವಾಲು ಶ್ರೀ ಪಿ.ಕೆ. ವಕೀಲರಿಂದ – 5 ನೇ ಆರೋಪಿ ಪರವಾಗಿ</u>**

5. ಪಾಟೀ ಸವಾಲು ಇರುವುದಿಲ್ಲ.

**ಮರು ವಿಚಾರಣೆಃ** ಇಲ್ಲ

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

**ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,**
**ಮೂಡಿಗೆರೆ.**

ಸಾಕ್ಷಿಯ ಸಹಿ

ಮಾ